# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 802 (710) |
| ಸದಸ್ಯರ ಹೆಸರು | : | ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 13.07.2023 |
| ಉತ್ತರಿಸುವ ಸಚಿವರು | : | ಮಾನ್ಯ ಉಪಮುಖ್ಯಮಂತ್ರಿಗಳು |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದಲ್ಲಿ ರೈತರಿಗೆ ಅನುಕೂಲವಾಗಲು ಬೃಹತ್ ನೀರಾವರಿ ಯೋಜನೆಗಳನ್ನು ಅನುಷ್ಠಾನ ಮಾಡಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ: | ಜಲ ಸಂಪನ್ಮೂಲ ಇಲಾಖೆ (ಭಾರಿ ಮತ್ತು ಮಧ್ಯಮ ನೀರಾವರಿ)ಯ ವ್ಯಾಪ್ತಿಯಲ್ಲಿ ಬರುವ 4 ನಿಗಮಗಳಿಂದ ರಾಜ್ಯದಲ್ಲಿ ರೈತರ ಅನೂಕೂಲಕ್ಕಾಗಿ ಬೃಹತ್ ನೀರಾವರಿ ಯೋಜನೆಗಳಡಿ ಏತ ನೀರಾವರಿ ಯೋಜನೆಗಳು, ಅಚ್ಚುಕಟ್ಟು ಸ್ಥಿರೀಕರಣ ಯೋಜನೆ ಮತ್ತು ನೀರಾವರಿ ಯೋಜನೆಗಳ ಕಾಲುವೆಗಳ ಆಧುನೀಕರಣ ಕಾಮಗಾರಿಗಳು ಹಾಗೂ ಕೆರೆ ತುಂಬಿಸುವ ಯೋಜನೆಗಳನ್ನು ಕೈಗೆತ್ತಿಗೊಂಡು ಅನುಷ್ಠಾನ ಮಾಡಲಾಗುತ್ತಿದೆ. |
| ಆ) | ಈ ನೀರಾವರಿ ಯೋಜನೆಗಳಿಗೆ ಎಷ್ಟು ಅನುದಾನವನ್ನು ನೀಡಿದೆ; ಈ ಅನುದಾನದಲ್ಲಿ ಡ್ಯಾಮ್ ಹಾಗೂ ಚಾನಲ್‌ಗಳ ಕಾಮಗಾರಿಗಳನ್ನು ಅಭಿವೃದ್ಧಿ ಮಾಡಲು ಸಾಧ್ಯವಾಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಾದಲ್ಲಿ, ಸರ್ಕಾರ ಇನ್ನೂ ಹೆಚ್ಚಿನ ಅನುದಾನವನ್ನು ನೀಡಲು ಯಾವ ಕ್ರಮವನ್ನು ಕೈಗೊಂಡಿದೆ? | 2023-24ನೇ ಸಾಲಿನ ಆಯವ್ಯಯದಲ್ಲಿ ಜಲ ಸಂಪನ್ಮೂಲ ಇಲಾಖೆ (ಭಾರಿ ಮತ್ತು ಮಧ್ಯಮ ನೀರಾವರಿ)ಗೆ ಒಟ್ಟು ರೂ.16735.49 ಕೋಟಿಗಳ ಅನುದಾನ ಹಂಚಿಕೆ ಮಾಡಲಾಗಿರುತ್ತದೆ.<br>ಜಲಸಂಪನ್ಮೂಲ ಇಲಾಖೆಯಡಿ ಈಗಾಗಲೇ ಅನುಷ್ಠಾನಕ್ಕೆ ಕೈಗೆತ್ತಿಕೊಂಡಿರುವ ಯೋಜನೆಗಳ ಕಾರ್ಯಭಾರ ಅಧಿಕವಾಗಿದ್ದು, ಪ್ರಸ್ತುತ ಪ್ರಗತಿಯಲ್ಲಿರುವ ಯೋಜನಾ ಕಾಮಗಾರಿಗಳಿಗೆ ಆಯವ್ಯಯದಲ್ಲಿ ಒದಗಿಸಲಾದ ಅನುದಾನವನ್ನು ಬಳಸಿ, ಯೋಜನಾ ಕಾಮಗಾರಿಗಳನ್ನು ಪೂರ್ಣಗೊಳಿಸಲು ಆದ್ಯತೆ ನೀಡಲಾಗುತ್ತದೆ. ಮುಂದುವರೆದು, ಇಲಾಖೆಗೆ ಮುಂದಿನ ದಿನಗಳಲ್ಲಿ ಒದಗಿಸುವ ಪೂರಕ ಅನುದಾನದಲ್ಲಿ ಬಾಕಿ ಯೋಜನಾ ಕಾಮಗಾರಿಗಳ ವೆಚ್ಚ ಭರಿಸಲು ಕ್ರಮವಹಿಸಲಾಗುವುದು. |

**ಸಂಖ್ಯೆ: ಜಸಂಇ 81 ಎಂಎಲ್‌ಎ 2023**

**(ಡಿ.ಕೆ.ಶಿವಕುಮಾರ್)**

**ಮಾನ್ಯ ಉಪ ಮುಖ್ಯ ಮಂತ್ರಿಗಳು**